ವಿ-72
ಕಿ-87

## ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಶರಣಗೌಡ ಪಾಟೀಲ್ ಬಯ್ಯಾಪುರ ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.

ವಿಷಯ: ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ವ್ಯಾಪ್ತಿಗೊಳಪಡುವ ತಾಲ್ಲೂಕುಗಳಲ್ಲಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿಯಿದ್ದು, ಗ್ರಾಮೀಣ ಮಟ್ಟದಲ್ಲಿ ಕೆಲಸ ಕಾರ್ಯ ಕುಂಟಿತಗೊಂಡಿರುತ್ತವೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕೊರತೆ ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮದ ಬಗ್ಗೆ ಹಾಗೂ ಯಾವ ಕಾಲಮಿತಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಆರಂಭಗೊಳಿಸುವ ಬಗ್ಗೆ.

-----

ಉತ್ತರ: ರಾಯಚೂರು ಜಿಲ್ಲೆಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 179 ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 145 ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, 34 ಹುದ್ದೆಗಳು ಖಾಲಿ ಇರುತ್ತವೆ.

ಕೊಪ್ಪಳ ಜಿಲ್ಲೆಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದಲ್ಲಿ 153 ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 135 ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, 18 ಹುದ್ದೆಗಳು ಖಾಲಿ ಇರುತ್ತವೆ.

ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ನಿವೃತ್ತಿ, ಅಮಾನತ್ತು, ಇನ್ನಿತರೆ ಕಾರಣಗಳಿಂದ ತೆರವಾದಲ್ಲಿ ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಪ್ರಭಾರದಲ್ಲಿರಿಸುವುದು. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಮುಂದುವರೆದು, ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಸಹ ನಿರ್ದೇಶನ ನೀಡಲಾಗಿದೆ.

**ಸಂಖ್ಯೆ: ಗ್ರಾಅಪ 58 ಗ್ರಾಪಂಅ 2022**

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.